**Akashvani : Bangalore**
**Regional Bulletin In Kannada**
**15.01.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಕಳೆದ ಡಿಸೆಂಬರ್ ವೇಳೆಗೆ ರಾಜ್ಯದಲ್ಲಿ ೪.೭೧ ಲಕ್ಷ ಕೋಟಿ ರೂಪಾಯಿ ಹೂಡಿಕೆ - ಸಚಿವ ಎಂ.ಬಿ. ಪಾಟೀಲ್ ಮಾಹಿತಿ

೨. ನಾಡಿನೆಲ್ಲೆಡೆ ಸಂಭ್ರಮದ ಮಕರ ಸಂಕ್ರಾಂತಿ ಆಚರಣೆ; ಬೆಂಗಳೂರಿನ ಗವಿ ಗಂಗಾಧರೇಶ್ವರ ಸ್ವಾಮಿಗೆ ಸೂರ್ಯ ರಶ್ಮಿ ಸ್ಪರ್ಶ

೩. ಫೆಬ್ರವರಿ ೧೩ರಿಂದ ವಿಶ್ವ ಪ್ರಸಿದ್ಧ ಹಂಪಿ ಉತ್ಸವ

೪. ಧಾರವಾಡದಲ್ಲಿ ನಾಳೆಯಿಂದ ಸಂಸದರ ಕ್ರೀಡಾ ಮಹೋತ್ಸವ

***************

೨೦೨೫ರ ಫೆಬ್ರವರಿಯಲ್ಲಿ ನಡೆಸಿದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ೧೦.೨೭ ಲಕ್ಷ ಕೋಟಿ ರೂಪಾಯಿ ಬಂಡವಾಳ ಹೂಡಿಕೆಯ ಖಾತರಿ ದೊರೆಯಿತು. ಈ ಪೈಕಿ ಡಿಸೆಂಬರ್ ವೇಳೆಗೆ ೪.೭೧ ಲಕ್ಷ ಕೋಟಿ ರೂಪಾಯಿ ನೈಜ ಹೂಡಿಕೆ ಆಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಇದೇ ೧೯ರಿಂದ ೨೩ರವರೆಗೆ ದಾವೋಸ್‌ನಲ್ಲಿ ವಿಶ್ವ ಮಟ್ಟದ ಆರ್ಥಿಕ ಶೃಂಗಸಭೆ ನಡೆಯಲಿದ್ದು, ಇದಕ್ಕೆ ಪೂರ್ವಭಾವಿಯಾಗಿ ಮಾಹಿತಿ ನೀಡಿದ ಸಚಿವರು, ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಮಾಡಿಕೊಂಡಿರುವ ಹೂಡಿಕೆ ಒಡಂಬಡಿಕೆಗಳಲ್ಲಿ ಶೇಕಡ ೪೬ರಷ್ಟು ನೈಜ ಹೂಡಿಕೆಯಾಗಿ ಸಾಕಾರಗೊಂಡಿದೆ ಎಂದರು.

ಈ ಪೈಕಿ ತಯಾರಿಕಾ ವಲಯಕ್ಕೆ ೫.೬೬ ಲಕ್ಷ ಕೋಟಿ ರೂಪಾಯಿ ಹೂಡಿಕೆ ಖಾತ್ರಿಯಲ್ಲಿ ೩.೨೨ ಲಕ್ಷ ಕೋಟಿ ರೂಪಾಯಿ ನೈಜ ಬಂಡವಾಳವಾಗಿ ಈಗಾಗಲೇ ಬಂದಿದೆ. ಹಾಗೆಯೇ, ಮರುಬಳಕೆ ಇಂಧನ ವಲಯದಲ್ಲಿ ೪.೨೫ ಲಕ್ಷ ಕೋಟಿ ರೂಪಾಯಿ ಖಾತ್ರಿಯ ಪೈಕಿ ೧.೪೧ ಲಕ್ಷ ಕೋಟಿ ರೂಪಾಯಿ ಹೂಡಿಕೆಯಾಗಿ ಹರಿದುಬಂದಿದೆ ಎಂದು ಅವರು ಮಾಹಿತಿ ನೀಡಿದರು.

ಸಿಲಿಕಾನ್ ಬಿಡಿಭಾಗಗಳನ್ನು ತಯಾರಿಸುವ ಸ್ಥಾವರ ಸ್ಥಾಪನೆಗೆ ೯ ಸಾವಿರದ ೩೦೦ ಕೋಟಿ ರೂಪಾಯಿ ಹಾಗೂ ಎಮ್ವೀ ಎನರ್ಜಿ ಕಂಪನಿಯು ಬೆಂಗಳೂರಿನ ಐಟಿಐಆರ್ ಪ್ರದೇಶದಲ್ಲಿ ಸೌರಕೋಶ ಮತ್ತು ಮಾಡ್ಯೂಲ್ ತಯಾರಿಕೆ ವಿಸ್ತರಣೆಗೆ ೫ ಸಾವಿರದ ೪೯೫ ಕೋಟಿ ರೂಪಾಯಿ ಹಾಗೂ ಜಿಂದಾಲ್ ಸ್ಟೀಲ್ಸ್ ವಿಜಯನಗರದಲ್ಲಿ ಎಲೆಕ್ಟ್ರಿಕಲ್ ಸ್ಟೀಲ್ ಘಟಕ ಸ್ಥಾಪನೆಗೆ ೭ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡುವ ಪ್ರಸ್ತಾವನೆಗಳನ್ನು ಸಲ್ಲಿಸಿವೆ ಎಂದು ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

***************

ರಾಜ್ಯಾದ್ಯಂತ ಮಕರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಬೆಂಗಳೂರಿನ ಗವಿ ಗಂಗಾಧರೇಶ್ವರಸ್ವಾಮಿ ದೇವಾಲಯದಲ್ಲಿಂದು ನಂದಿ ಮೂಲಕ ದೇಗುಲ ಪ್ರವೇಶಿಸಿದ ಸೂರ್ಯರಶ್ಮಿ, ಸಂಜೆ ೫ ಗಂಟೆ ೫ ನಿಮಿಷಕ್ಕೆ ಗವಿ ಗಂಗಾಧರನಿಗೆ ಸ್ಪರ್ಶಿಸಿತು. ನೂರಾರು ಭಕ್ತರು ಇದನ್ನು ಕಣ್ತುಂಬಿಕೊಂಡರು. ದಾವಣಗೆರೆ ಜಿಲ್ಲೆಯಲ್ಲಿಂದು ಮಕರ ಸಂಕ್ರಾಂತಿ ಹಬ್ಬವನ್ನು ಆಚರಿಸಲಾಯಿತು. ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ರೈತಾಪಿ ವರ್ಗದವರು, ಜಾನುವಾರುಗಳ ಮೈ ತೊಳೆದು ಪೂಜೆ ಸಲ್ಲಿಸಿದರು. ನಂತರ ಎಳ್ಳು-ಬೆಲ್ಲ ಬೀರುವ ಮೂಲಕ ಹಬ್ಬದ ಸಂಭ್ರಮವನ್ನು ಇಮ್ಮಡಿಗೊಳಿಸಿದರು.

ಕೆಲವರು ರೊಟ್ಟಿ ಬುತ್ತಿಯೊಂದಿಗೆ ಜಿಲ್ಲೆಯ ಪ್ರವಾಸಿ ತಾಣಗಳಿಗೆ ಕುಟುಂಬ ಸಹಿತ ತೆರಳಿ ಸಂಕ್ರಾಂತಿಯ ಸಂಭ್ರಮದಲ್ಲಿ ಭಾಗಿಯಾದರು. ಹೊನ್ನಾಳಿ, ನ್ಯಾಮತಿ, ಹರಿಹರ ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಸಂಜೆ ದನಗಳನ್ನು ಕಿಚ್ಚು ಹಾಯಿಸುವ ಕಾರ್ಯಕ್ರಮಗಳು ಜರುಗಲಿವೆ.

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಸಂಕ್ರಾಂತಿ ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತಿದೆ. ಹಬ್ಬದ ಅಂಗವಾಗಿ ಚಿಕ್ಕಮಗಳೂರಿನ ಬೋಳ ರಾಮೇಶ್ವರ ದೇವಾಲಯ, ಬಾಳೆಹೊನ್ನೂರಿನ ರಂಭಾಪುರಿ ಮಠ, ಹೊರನಾಡು ಅನ್ನಪೂರ್ಣೇಶ್ವರಿ ದೇವಾಲಯಗಳಲ್ಲಿ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿತ್ತು. ಚಿಕ್ಕಮಗಳೂರು ನಗರದ ರಾಮ ಮಂದಿರದಲ್ಲಿ ವಿಶೇಷ ರಂಗೋಲಿ ಬಿಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗ್ರಾಮೀಣ ಭಾಗಗಳಲ್ಲಿ ದವಸ ಧಾನ್ಯಗಳಿಗೆ ಪೂಜೆ ಸಲ್ಲಿಸಿ, ಎಳ್ಳು ಬೆಲ್ಲ ಹಂಚಲಾಯಿತು.

***************

ವಿಶ್ವ ಪ್ರಸಿದ್ಧ ಹಂಪಿ ಉತ್ಸವ ನಾಡ ಹಬ್ಬವಿದ್ದಂತೆ, ಎಲ್ಲರೂ ಸೇರಿ ವಿಜೃಂಭಣೆಯಿಂದ ಹಾಗೂ ವಿನೂತನವಾಗಿ ಆಚರಿಸಲು ಎಲ್ಲಾ ಸಿದ್ಧತೆ ಕೈಗೊಳ್ಳುವಂತೆ ವಸತಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ವಿಜಯನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಹಂಪಿ ಉತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಹಂಪಿ ಉತ್ಸವವನ್ನು ಫೆಬ್ರವರಿ ೧೩, ೧೪ ಹಾಗೂ ೧೫ ರಂದು ಹಮ್ಮಿಕೊಳ್ಳಲಾಗಿದೆ. ಫೆಬ್ರವರಿ ೧೩ರಂದು ಹಂಪಿ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿದ್ಯುಕ್ತ ಚಾಲನೆ ನೀಡುವರು ಎಂದು ತಿಳಿಸಿದರು.

ಜಿಲ್ಲೆಯ ವಿವಿಧ ತಾಲೂಕು ಹಾಗೂ ಗ್ರಾಮೀಣ ಭಾಗದಿಂದ ಬರುವಂತಹ ಸಾರ್ವಜನಿಕರಿಗೆ ಸಾರಿಗೆ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಸೌಕರ್ಯ ಒದಗಿಸಲಾಗುವುದು. ಉತ್ಸವದ ಅಂಗವಾಗಿ ಕಲೆ, ಚಿತ್ರಕಲೆ, ವಾಸ್ತುಶಿಲ್ಪ, ಫಲಪುಷ್ಪ ಪ್ರದರ್ಶನ, ಸಾಹಸಕ್ರೀಡೆ, ಸುಗಮ ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು.

ಸ್ಥಳೀಯ ಕಲಾವಿದರಿಂದ ವಿಜಯನಗರ ಸಾಮ್ರಾಜ್ಯದ ಆಡಳಿತದ ಗತವೈಭವ ಕುರಿತ ಧ್ವನಿ ಬೆಳಕು ಪ್ರದರ್ಶನ ಮಾಡಲಾಗುತ್ತದೆ. ಅದರಂತೆ ಕಲಾವಿದರು ಹಂಪಿ ಉತ್ಸವದಲ್ಲಿ ಭಾಗವಹಿಸಿ ನಾಡಹಬ್ಬ ಹಂಪಿ ಉತ್ಸವಕ್ಕೆ ಮತ್ತಷ್ಟು ಮೆರಗು ತುಂಬಲಿದ್ದಾರೆ. ಈ ಬಾರಿ ಉತ್ಸವದಲ್ಲಿ ವಿಶೇಷವಾಗಿ ಮುಂಬೈ ತಾಂತ್ರಿಕ ಕಲಾಬಳಗದಿಂದ ಮೂರು ಸಾವಿರ ಡ್ರೋನ್ ಬಳಸಿ ಡ್ರೋನ್ ಶೋ ಏರ್ಪಡಿಸಲಾಗಿದೆ. ಅಲ್ಲದೇ ಗಾಳಿಪಟ ಉತ್ಸವ ಕೂಡ ಆಯೋಜಿಸಲಾಗಿದೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಮಾಹಿತಿ ನೀಡಿದರು.

***************

ಅರಣ್ಯ ಇಲಾಖೆ ವತಿಯಿಂದ ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯ ಹಾರ್ನಬಿಲ್ ಸಭಾಭವನದಲ್ಲಿ ನಾಳೆ ಮತ್ತು ನಾಡಿದ್ದು ಹಾರ್ನಬಿಲ್ ಹಬ್ಬ-೨೦೨೬ ನಡೆಯಲಿದೆ. ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದು, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

***************

ಧಾರವಾಡ ತಾಲೂಕ ಹಂಗರಕಿ-ಗರಗ ಗ್ರಾಮದಲ್ಲಿ ನಾಳೆ ಮತ್ತು ನಾಡಿದ್ದು, 'ಸಂಸದರ ಕ್ರೀಡಾ ಮಹೋತ್ಸವ' ಆಯೋಜಿಸಲಾಗಿದೆ ಎಂದು ಮಾಜಿ ಶಾಸಕ ಅಮೃತ ದೇಸಾಯಿ ತಿಳಿಸಿದ್ದಾರೆ.

ಹೊನಲು ಬೆಳಕಿನ ಪಂದ್ಯಾವಳಿಗೆ ಈಗಾಗಲೇ ಎಲ್ಲ ತಯಾರಿ ಮಾಡಲಾಗಿದೆ. ಧಾರವಾಡ ಗ್ರಾಮೀಣ ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ, ಗೌರವಿಸುವ ದೃಷ್ಟಿಯಿಂದ ಸಂಸದರ

ಕ್ರೀಡಾ ಮಹೋತ್ಸವ ಆಯೋಜಿಸಲಾಗಿದೆ. ಕ್ರೀಡಾ ಮಹೋತ್ಸವಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಚಾಲನೆ ನೀಡಲಿದ್ದು, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.  ಯುವಕರಲ್ಲಿ ಕ್ರೀಡಾ, ಸಾಂಸ್ಕೃತಿಕ ಮತ್ತು ನಾಯಕತ್ವ ಗುಣ ಉತ್ತೇಜಿಸಲು ದೇಶದ ಪ್ರತಿಯೊಂದು ಲೋಕಸಭಾ ಕ್ಷೇತ್ರಗಳಲ್ಲಿ ಸಂಸದರ ಕ್ರೀಡಾ ಮಹೋತ್ಸವವನ್ನು ಕೇಂದ್ರ ಸರ್ಕಾರ ಆರಂಭಿಸಿದೆ ಎಂದು ಅಮೃತ ದೇಸಾಯಿ ಹೇಳಿದರು.

***************

ದಾವಣಗೆರೆ ಜಿಲ್ಲೆಯಲ್ಲಿ ಮಕ್ಕಳಿಂದ ವಾಹನ ಚಾಲನೆ ಪ್ರಕರಣಗಳ ಹೆಚ್ಚಳ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯಿಂದ ಇಂದು ಪೋ?ಕರಿಗೆ ಸಂಚಾರ ಅರಿವು ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿ?ಧಿಕಾರಿ ಉಮಾ ಪ್ರಶಾಂತ್ ಮಾತನಾಡಿ, ೧ ವರ್ಷದ ಅವಧಿಯಲ್ಲಿ ದಾವಣಗೆರೆ ಜಿಲ್ಲೆಯಲ್ಲಿ ವಾಹನ ಚಲಾಯಿಸುತ್ತಿದ್ದ ವೇಳೆ ನಡೆದ ಅಪಘಾತದಲ್ಲಿ ಐವರು ಮಕ್ಕಳು ಸಾವನ್ನಪ್ಪಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

ಮಕ್ಕಳಿಗೆ ವಾಹನ ಚಾಲನೆ ಮಾಡಲು, ವಾಹನ ನೀಡುವ ಪೋ?ಕರಿಗೆ ಗರಿ? ದಂಡ ಮತ್ತು ಜೈಲು ಶಿಕ್ಷೆ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ. ಈ ಹಿನ್ನೆಲೆಯಲ್ಲಿ ಪೋ?ಕರು ಎಚ್ಚರಿಕೆಯಿಂದ ಇರಬೇಕು ಎಂದು ಉಮಾ ಪ್ರಶಾಂತ್ ಎಚ್ಚರಿಸಿದರು.

***************

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ 'ನಮ್ಮೂರು ನಮ್ಮ ಶ್ರದ್ಧಾ ಕೇಂದ್ರ' ಅಭಿಯಾನ ಸಪ್ತಾಹದ ಭಾಗವಾಗಿ ಈ ಬಾರಿ ಮಕರ ಸಂಕ್ರಾಂತಿಯ ಸಂದರ್ಭ ರಾಜ್ಯಾದ್ಯಂತ ೧೪ ಸಾವಿರದ ೪೯ ಶ್ರದ್ಧಾ ಕೇಂದ್ರಗಳಲ್ಲಿ ಸುಮಾರು ೩ ಲಕ್ಷದ ೩೯ ಸಾವಿರದ ೭೯೯ ಸ್ವಯಂ ಸೇವಕರು ಸ್ವಚ್ಛತಾ ಕಾರ್ಯ ನಿರ್ವಹಿಸಿದ್ದಾರೆ ಎಂದು ಯೋಜನೆಯ ಕಾರ್ಯನಿರ್ವಾಹಕ ನಿರ್ದೇಶಕ ಅನಿಲ್ ಕುಮಾರ್ ಎಸ್.ಎಸ್. ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಪರಿಕಲ್ಪನೆಯ ಸ್ವಚ್ಛ ಭಾರತ ಅಭಿಯಾನಕ್ಕೆ ಪೂರಕವಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯನಿರ್ವಹಿಸುತ್ತಿದೆ ಎಂದರು.  ಈ ಬಾರಿಯ ಸ್ವಚ್ಛತಾ ಸಪ್ತಾಹದಲ್ಲಿ ೧೩ ಸಾವಿರದ ೨೮೨ ದೇವಸ್ಥಾನ, ೩೩ ಬಸದಿ, ೩೫೦ ಮಸೀದಿ, ೧೨೦ ಚರ್ಚ್ ಸೇರಿದಂತೆ ಇತರೆ ೨೬೪ ಸಾರ್ವಜನಿಕ ಸ್ಥಳ, ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಗಿದೆ ಎಂದು ಅನಿಲ್ ಕುಮಾರ್ ಮಾಹಿತಿ ನೀಡಿದರು.

***************

ಇಂದಿನ ಯುವ ಪೀಳಿಗೆ ಸ್ವಾಮಿ ವಿವೇಕಾನಂದರ ಜೀವನ ಹಾಗೂ ತತ್ವಗಳನ್ನು ಆದರ್ಶವಾಗಿಟ್ಟುಕೊಂಡು, ಅವುಗಳನ್ನು ಪಾಲಿಸಬೇಕು ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಅಣ್ಣಯ್ಯ ಹೇಳಿದ್ದಾರೆ.

ಬಿಡದಿಯ ಜ್ಞಾನವಿಕಾಸ ವಿದ್ಯಾ ಸಂಘದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ, ಜಿಲ್ಲಾ ವಕೀಲರ ಸಂಘ ಹಾಗೂ ಜ್ಞಾನ ವಿಕಾಸ ವಿದ್ಯಾ ಸಂಘದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಯುವ ದಿನ, ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗುರಿ ಇಲ್ಲದೆ ಸಾಧನೆ ಮಾಡಲು ಪ್ರಯತ್ನಪಟ್ಟರೆ, ತಂದೆ-ತಾಯಿಯ ಆಸೆ, ಆಕಾಂಕ್ಷೆಗಳನ್ನು ಈಡೇರಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದಾಗಿ ಯುವಜನರು ಇಚ್ಛಾಶಕ್ತಿಯೊಂದಿಗೆ ಅಚಲವಾದ ಗುರಿ ಹೊಂದಿರಬೇಕು ಎಂದು ಸಲಹೆ ನೀಡಿದರು.

********ಮುಕ್ತಾಯ*******